ತಾಳಿಕೋಟೆ ಮುದ್ದೇಬಿಹಾಳ ರಸ್ತೆ ದುರಸ್ತಿ ಪಡಿಸುವುದು

ಶ್ರೀ ಅಪ್ಪಾಜಿ @ ಚನ್ನಬಸವರಾವ್ ಶಂಕರರಾವ್ ನಾಡಗೌಡ (ಮುದ್ದೇಬಿಹಾಳ) :–

249(617) ಮಾನ್ಯ ಲೋಕೋಪಯೋಗಿ ಸಚಿವರು ಈ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ :–

(ಅ) ತಾಳಿಕೋಟೆ – ಮುದ್ದೇಬಿಹಾಳ ಮುಖ್ಯ ರಸ್ತೆ ಸಂಚಾರವು ಯೋಗ್ಯ ಸ್ಥಿತಿಯಲ್ಲಿ ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ರಸ್ತೆಯಲ್ಲಿ ಸಂಚರಿಸುವ ಸರ್ಕಾರಿ : ಖಾಸಗಿ ವಾಹನಗಳು ರಿಪೇರಿಗೆ ಬಂದು ನಷ್ಟವನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ (ಇದರ ನಷ್ಟದ ಬಗ್ಗೆ ಸಂಪೂರ್ಣ ವಿವರ ನೀಡುವುದು) ;

(ಇ) ಹಾಗಿದ್ದಲ್ಲಿ, ಎಂದಿನಿಂದ ರಸ್ತೆಯ ಕಾಮಗಾರಿಯನ್ನು ಕೈಗೊಳ್ಳಲಾಗುವುದು (ವಿವರ ನೀಡುವುದು) ?

ಶ್ರೀ ಸಿ.ಎಂ. ಉದಾಸಿ ಮಾನ್ಯ ಲೋಕೋಪಯೋಗಿ ಸಚಿವರು :–

(ಅ) ಬಂದಿದೆ.

(ಆ) ಬಂದಿದೆ.

(ಇ) ತಾಳಿಕೋಟೆ – ಮುದ್ದೇಬಿಹಾಳ ರಸ್ತೆಯು 30.00 ಕಿ.ಮೀ. ಉದ್ದವಿದ್ದು, 2011–12ನೇ ಸಾಲಿನ ವಾರ್ಷಿಕ ನಿರ್ವಹಣಾ ಕಾಮಗಾರಿಯನ್ನು ಕೈಗೊಂಡಿದ್ದು, ರಸ್ತೆಯನ್ನು ಸಂಚಾರ ಯೋಗ್ಯವಾಗಿಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ಸರ್ಕಾರಿ ಪದವಿ ಪೂರ್ವ ಕಾಲೇಜಿಗೆ ಜಮೀನು

ಶ್ರೀ ಅಶೋಕ್ ಮಹದೇವಪ್ಪ ಪಟ್ಟಣ (ರಾಮದುರ್ಗ) :–

250(644) ಮಾನ್ಯ ತೋಟಗಾರಿಕೆ ಹಾಗೂ ಸಕ್ಕರೆ ಸಚಿವರು ಈ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ :–

(ಅ) ರಾಮದುರ್ಗ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಸರ್ಕಾರಿ ಪದವಿ ಪೂರ್ವ ಕಾಲೇಜು, ಸುರೇಬಾನ್ ಇದಕ್ಕೆ ಸ್ವಂತ ಕಟ್ಟಡ ಮತ್ತು ಜಾಗ ಇಲ್ಲದೇ ಕನ್ನಡ ಸಂಘದ ಕಟ್ಟಡದಲ್ಲಿ ತರಗತಿಗಳು ನಡೆಯುತ್ತಿದ್ದು. ಇದಕ್ಕೆ ತೋಟಗಾರಿಕೆ ಫಾರಂನಿಂದ ಜಾಗ ಮಂಜೂರು ಮಾಡುವ ಪ್ರಸ್ತಾವನೆ ಯಾವ ಹಂತದಲ್ಲಿದೆ ;

(ಆ) ಕೆ.ಎಸ್.ಹೆಚ್.ಡಿ.ಎ. ಎಕ್ಸಿಕ್ಯೂಟಿವ್ ಕಮಿಟಿ ಸಭೆಯ ಈ ಪ್ರಸ್ತಾವನೆಯನ್ನು ತಿರಸ್ಕರಿಸುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ?

ಶ್ರೀ ಎಸ್.ಎ. ರವೀಂದ್ರನಾಥ್ (ತೋಟಗಾರಿಕೆ ಹಾಗೂ ಸಕ್ಕರೆ ಸಚಿವರು)

(ಅ) ಕರ್ನಾಟಕ ರಾಜ್ಯ ತೋಟಗಾರಿಕೆ ಅಭಿವೃದ್ಧಿ ಏಜೆನ್ಸಿಯ 8ನೇ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಸದರಿ ಪ್ರಸ್ತಾವನೆಯನ್ನು ತಿರಸ್ಕರಿಸಲಾಗಿದೆ.

(ಆ) ಹೌದು ಸದರಿ ಕಾಲೇಜಿಗೆ ಸ್ಥಳಾವಕಾಶ ಕಲ್ಪಿಸುವ ಬಗ್ಗೆ ಪರ್ಯಾಯ ವ್ಯವಸ್ಥೆ ಮಾಡುವ ವಿಷಯ ಶಿಕ್ಷಣ ಇಲಾಖೆಗೆ ಸಂಬಂಧಿಸಿರುತ್ತದೆ.

ರಾಜ್ಯದಲ್ಲಿ ಆಫ್ರಿಕನ್ ಕ್ಯಾಟ್ ಫಿಶ್ ಸಾಗಾಣಿಕೆ

ಶ್ರೀ ಬಚ್ಚೇಗೌಡ ಕೆ.ಪಿ. (ಚಿಕ್ಕಬಳ್ಳಾಪುರ) :-

251(624) ಮಾನ್ಯ ಮೀನುಗಾರಿಕೆ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ :-

(ಅ) ರಾಜ್ಯದಲ್ಲಿ ಆಫ್ರಿಕನ್ ಕ್ಯಾಟ್ ಫಿಶ್ ಸಾಗಾಣಿಕೆ ಮಾಡಲು ಸರ್ಕಾರ ಸಾರ್ವಜನಿಕರಿಗೆ ಅನುಮತಿ ನೀಡಿದೆಯೇ ;

(ಆ) ಆಫ್ರಿಕನ್ ಕ್ಯಾಟ್ ಫಿಶ್‌ನ್ನು ಅಕ್ರಮವಾಗಿ ಸಾಕಾಣಿಕೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಿದ್ದಲ್ಲಿ, ಈ ಮೀನುಗಳು ನದಿ ಮತ್ತು ಕೆರೆಗಳಿಗೆ ಬಿತ್ತನೆಯಾದರೆ ಜಲಚರಗಳ ಸಂತತಿ ನಾಶವಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಅಕ್ರಮವಾಗಿ ಸಾಕಾಣಿಕೆ ಮಾಡುವವರ ವಿರುದ್ಧ ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಉ) ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಈ ರೀತಿ ಅಕ್ರಮ ಸಾಕಾಣಿಕೆ ಪ್ರಕರಣಗಳು ಎಷ್ಟು ದಾಖಲಾಗಿವೆ (ವಿವರಗಳನ್ನು ನೀಡುವುದು) ?